# ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 485 ಯುಬಿವಿ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25-5-2009

ಇಂದ
ಸರ್ಕಾರದ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು-56.

ಮಾನ್ಯರೆ,

ವಿಷಯ:- 2008-09ನೇ ಶೈಕ್ಷಣಿಕ ಸಾಲಿಗೆ ಬೆಂಗಳೂರಿನ ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್‌ನ ಹೊಸ ಎಂ.ಬಿ.ಎ. ಕೋರ್ಸಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:- ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್‌ನ ಪ್ರಾಂಶುಪಾಲರ ಪತ್ರ ದಿ:21-11-2008.

---

ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋಸೈನ್ಸ್ ಅಂಡ್ ಮ್ಯಾವೇಜ್‌ಮೆಂಟ್ ಸ್ಟಡೀಸ್, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು-560 074 ಇಲ್ಲಿ 2008-09ನೇ ಶೈಕ್ಷಣಿಕ ಸಾಲಿನಿಂದ ಹೊಸ ಎಂ.ಬಿ.ಎ. ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಬೆಂಗಳೂರು ವಿಶ್ವವಿದ್ಯಾಲಯದ ಶಿಫಾರಸ್ಸು ಮತ್ತು ಎ.ಐ.ಸಿ.ಟಿ.ಇ. ಯ ಮಾನ್ಯತೆಯನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು-560 074 ಇಲ್ಲಿ ಹೊಸ ಎಂ.ಬಿ.ಎ. ಕೋರ್ಸನ್ನು 60 (ಅರವತ್ತು) ವಿದ್ಯಾರ್ಥಿ ಪ್ರಮಾಣದೊಂದಿಗೆ 2008-09ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:-**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

..2..

4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ- 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

25/5

(ಯು.ಬಿ. ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಹೊರಡಿಸಲಾಗಿದೆ
ದಿನಾಂಕ 26/5/09

ಪ್ರತಿ:-

1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2) ಕಾಲೇಜು ಶಿಕ್ಷಣ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು.
3) ಪ್ರಾಂಶುಪಾಲರು, ಡಾನ್ ಬಾಸ್ಕೋ ಇನ್ಸ್‌ಟಿಟ್ಯೂಟ್ ಆಫ್ ಬಯೋಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಕುಂಬಳಗೋಡು, ಮೈಸೂರು ರಸ್ತೆ, ಬೆಂಗಳೂರು-560 074.